ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಪಶು ಔಷಧಗಳ ಅಭಾವ ಕುರಿತು

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

467(540) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿಯೇ ಪಶುಗಳಿಗೆ ಔಷಧ ಕೊರತೆ ಎದುರಾಗಿರುವ ದೂರುಗಳು ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೀದರ್ ಜಿಲ್ಲೆಯ 114 ಪಶು ಆಸ್ಪತ್ರೆ ಮತ್ತು ಚಿಕಿತ್ಸಾ ಕೇಂದ್ರಗಳಲ್ಲಿ ಪಶು ಔಷಧಗಳ ತೀವ್ರ ಅಭಾವ ಉಂಟಾಗಿದ್ದು, ಬೆಂಗಳೂರಿನಿಂದ ಔಷಧಗಳ ಸರಬರಾಜು ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಗುಣಮಟ್ಟದ ಮತ್ತು ಹೆಚ್ಚಿನ ದರದ ಉತ್ತಮ ಪಶು ಔಷಧಿಗಳ ಸರಬರಾಜಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಮಾಹಿತಿ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿ ಇಲಾಖೆಯ ಮಹತ್ವದ ಹುದ್ದೆಗಳು, ಪಶು ವೈದ್ಯಾಧಿಕಾರಿ, ಜಾನುವಾರು ಅಭಿವೃದ್ಧಿ ಅಧಿಕಾರಿ ಹುದ್ದೆಗಳೂ ಸೇರಿದಂತೆ ಸುಮಾರು 156 ಪ್ರಮುಖ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಈ ಹುದ್ದೆಗಳ ಶೀಘ್ರ ಭರ್ತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಮಾಹಿತಿ ನೀಡುವುದು)